# ಕರ್ನಾಟಕಸರ್ಕಾರದನಡವಳಿಗಳು

**ವಿಷಯ:** ಹಿಂದುಳಿದ ವರ್ಗಗಳಿಗೆ ಗ್ರಾಮೀಣ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಲು ಸ್ವತಂತ್ರವಾದ ಮತ್ತು ಸಮರ್ಪಿತವಾದ ಆಯೋಗವನ್ನು ರಚಿಸುವ ಬಗ್ಗೆ.

**ಓದಲಾಗಿದೆ:** 1) ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ದಿನಾಂಕ:11.05.2010

2) ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ:23.03.2022 ಹಾಗೂ ದಿನಾಂಕ: 31.03.2022 ರಂದು ನಡೆದ ಸರ್ವ ಪಕ್ಷಗಳ ಪ್ರತಿನಿಧಿಗಳ ಸಭೆ.

* * * * *

**ಪ್ರಸ್ತಾವನೆ:-**

ಮೇಲೆ ಓದಲಾದ (1) ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದ ರಿಟ್ ಅರ್ಜಿ ಸಂಖ್ಯೆ(ಸಿವಿಲ್): 356/1994ರಲ್ಲಿ ಡಾ|| ಕೃಷ್ಣಮೂರ್ತಿ ಮತ್ತಿತರರು ವಿರುದ್ಧ ಕೇಂದ್ರ ಸರ್ಕಾರ ಮತ್ತಿತರರು ಹಾಗೂ ಮಹಾರಾಷ್ಟ್ರ ರಾಜ್ಯದ ಮತ್ತು ಮಧ್ಯಪ್ರದೇಶ ರಾಜ್ಯದ ಪ್ರತ್ಯೇಕ ಪ್ರಕರಣಗಳಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಪಂಚಾಯತ್ ರಾಜ್ ಸಂಸ್ಥೆಗಳ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯವನ್ನು ಕಲ್ಪಿಸುವ ಸಲುವಾಗಿ ಸ್ವತಂತ್ರವಾದ ಮತ್ತು ಸಮರ್ಪಿತವಾದ ಒಂದು ಆಯೋಗವನ್ನು ರಚಿಸುವಂತೆ ಸೂಚಿಸಿರುತ್ತದೆ.

ಮೇಲೆ ಓದಲಾದ (2) ರಂತೆ ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 23.03.2022 ಹಾಗೂ ದಿನಾಂಕ:31.03.2022 ರಂದು ನಡೆದ ಸರ್ವಪಕ್ಷಗಳ ಪ್ರತಿನಿಧಿಗಳು ಹಾಗೂ ಅಡ್ವೋಕೇಟ್ ಜನರಲ್ ರವರು ಮತ್ತು ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಇತರೆ ಹಿರಿಯ ಅಧಿಕಾರಿಗಳೊಂದಿಗೆ ಜರುಗಿದ ಸಭೆಯಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳು ಮತ್ತು ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಹಿಂದುಳಿದ ವರ್ಗಗಳಿಗೆ ಸೂಕ್ತ ಪ್ರಾತಿನಿಧ್ಯವನ್ನು ಕಲ್ಪಿಸಿಯೇ ಚುನಾವಣೆ ನಡೆಸುವ ಬಗ್ಗೆ ಚರ್ಚಿತವಾಗಿರುತ್ತದೆ.

ಅದರಂತೆ ರಾಜ್ಯದಲ್ಲಿ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳ ರಾಜಕೀಯ ಪ್ರಾತಿನಿಧ್ಯಕ್ಕೆ ಸಂಬಂಧಿಸಿದಂತೆ ಸಮಕಾಲೀನ ಅಧ್ಯಯನವನ್ನು ನಡೆಸಲು ರಾಜ್ಯ ಸರ್ಕಾರವು ಪ್ರತ್ಯೇಕ ಆಯೋಗವನ್ನು ರಚಿಸಲು ನಿರ್ಧರಿಸಿ ಹಿಂದುಳಿದ ವರ್ಗಗಳಲ್ಲಿ ರಾಜಕೀಯ ಹಿಂದುಳಿದಿರುವಿಕೆಯನ್ನು ಗುರುತಿಸಲು ಹಾಗೂ ಸದರಿ ಹಿಂದುಳಿದ ವರ್ಗಗಳಿಗೆ ಮೀಸಲಾತಿ ಕಲ್ಪಿಸಲು ಅಧ್ಯಯನ ನಡೆಸಿ ಶಿಫಾರಸ್ಸು ಮಾಡಲು ಸ್ವತಂತ್ರ ಆಯೋಗ ಒಂದನ್ನು ರಚಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಹಿಂವಕ 114 ಬಿಸಿಎ 2022 ,ಬೆಂಗಳೂರು, ದಿನಾಂಕ:07.05.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನಂತೆ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳಲ್ಲಿ ರಾಜಕೀಯ ಹಿಂದುಳಿದಿರುವಿಕೆಯನ್ನು ಗುರುತಿಸಲು ಹಾಗೂ ಸದರಿ ಹಿಂದುಳಿದ ವರ್ಗಗಳಿಗೆ ಸೂಕ್ತ

********

ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಿ ಶಿಫಾರಸ್ಸು ಮಾಡಲು ಈ ಕೆಳಕಂಡಂತೆ ಅಧ್ಯಕ್ಷರು ಹಾಗೂ ಸದಸ್ಯರನ್ನೊಳಗೊಂಡಂತೆ ಆಯೋಗವನ್ನು ರಚಿಸಲಾಗಿದೆ.

| ಕ್ರ.ಸಂ | ಹೆಸರು | ಪದನಾಮ |
|---|---|---|
| 1. | ಡಾ.ಜಸ್ಟೀಸ್ ಕೆ. ಭಕ್ತವತ್ಸಲ | ಅಧ್ಯಕ್ಷರು |
| 2. | ಶ್ರೀ ಸಿ.ಆರ್.ಚಿಕ್‌ಮಠ್, ಐಎಎಸ್(ನಿವೃತ್ತ) | ಸದಸ್ಯರು |

ಸದರಿ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರ ನೇಮಕದ ನಿಯಮಗಳ ಕುರಿತ ಷರತ್ತು ಹಾಗೂ ನಿಬಂಧನೆಗಳನ್ನು ಹಾಗೂ ಆಯೋಗದ ಉಲ್ಲೇಖದ ನಿಯಮಗಳ ಕುರಿತಂತೆ ಪ್ರತ್ಯೇಕ ಆದೇಶ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

21/5/2022

(ಆರ್. ಉಮಾದೇವಿ)
ಸರ್ಕಾರದ ಉಪ ಕಾರ್ಯದರ್ಶಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ
4. ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಬೆಂಗಳೂರು.

ಮಾಹಿತಿಗಾಗಿ:

1. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಉಪಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತಸಹಾಯಕರು, ವಿಕಾಸಸೌಧ, ಬೆಂಗಳೂರು.
6. ಶಾಖಾರಕ್ಷಾಕಡತ/ಹೆಚ್ಚುವರಿಪ್ರತಿಗಳು.